V.P.G.C
PromNo. 24
Date 06/08/19

ವಿಭಾಗ : UNIREG
ದೂರವಾಣಿ ಸಂಖ್ಯೆ :2419440/2419361
ಫ್ಯಾಕ್ಸ್ ಸಂಖ್ಯೆ : 0821- 2419363/2419301

ಇಮೇಲ್ :registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು-570 005.

ವಿಷಯ: 2019-20ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಸುತ್ತೋಲೆ ಸಂಖ್ಯೆ:ಇಟಿ11/28/2019-20, ದಿನಾಂಕ 11.06.2019.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಮಂಡ್ಯ ಇವರ ಪತ್ರ ಸಂಖ್ಯೆ: ಸರ್.ಎಂ.ವಿ.ಸ್ನಾ.ಕೇ.ಮ/287/2019-20, ದಿನಾಂಕ 10-07-2019.
3. ದಿನಾಂಕ 28.06.2019ರಂದು ನಡೆದ ಸಿಂಡಿಕೇಟ್ ಸಭೆಯ ತೀರ್ಮಾನ.

*****

## ಆದೇಶ ಸಂಖ್ಯೆ: ಇಟಿ10/226/2018-19 ದಿನಾಂಕ 01ನೇ ಆಗಸ್ಟ್ 2019 (1)

ದಿನಾಂಕ 28.06.2019ರಂದು ನಡೆದ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಯ ತೀರ್ಮಾನದನ್ವಯ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2019-20ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರದ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) | ಸ್ನಾತಕೋತ್ತರ ಕೇಂದ್ರ | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| ಶ್ರೀಮತಿ ಅನಿತ ಹೆಚ್., D/o ಹನುಮೇಗೌಡ, ಅರೆಚಾಕನಹಳ್ಳಿ ಗ್ರಾಮ, ಕರಡಕೆರೆ ಅಂಚೆ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ. | ಗಣಿತಶಾಸ್ತ್ರ | 12 | ಸರ್ ಎಂ.ವಿಶ್ವೇಶ್ವರಯ್ಯ ಸ್ನಾತಕೋತ್ತರ ಕೇಂದ್ರ, ಮಂಡ್ಯ | 19,500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ತಲುಪಿದ 7 ದಿನಗಳೊಳಗೆ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಸ್ನಾತಕೋತ್ತರ ಕೇಂದ್ರದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

6/8/19